2016

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯಃ ಮೈಸೂರು–ನಂಜನಗೂಡು ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾ ಯೋಜನೆ (ಪರಿಷ್ಕೃತ–2)ಕ್ಕೆ ಸರ್ಕಾರದ **ಅಂತಿಮ ಅನುಮೋದನೆ** ನೀಡುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ನಅಇ:597:ಮೈಅಪ್ರಾ:2011, ಬೆಂಗಳೂರು ದಿನಾಂಕ 01–08–2012.
2. ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು, ಬೆಂಗಳೂರು ರವರ ಪತ್ರ ಸಂಖ್ಯೆ:ನಗ್ರಯೋ/ಮಮೈ/ಮಯೋ(ಪ–2)/139/2013–14, ದಿನಾಂಕ:21.10.2015
3. ಮಾನ್ಯ ಉಚ್ಚ ನ್ಯಾಯಾಲಯದ ಅರ್ಜಿ ಸಂಖ್ಯೆ:19273, 26632–26665–7606/2014, ಮತ್ತು 8629–8861/2014(ಎಲ್‌ಬಿ–ಆರ್‌ಇಎಸ್) ದಿನಾಂಕ:02.09.2014.
4. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಪತ್ರ ಸಂಖ್ಯೆ: ಮೈನಪ್ರಾ:ನಯೋ: ಮ.ಯೋ.ಸಭೆ/ಹೆವಿ.02/2015–16, ದಿನಾಂಕ 10.12.2015,
5. ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು ಬೆಂಗಳೂರು ರವರ ಪತ್ರ ಸಂಖ್ಯೆ:ನಗ್ರಾಯೋ/ಮಮೈ/ಮಯೋ(ಪ–2)/139/2015–16, ದಿನಾಂಕ 10.12.2015

*****

ಪ್ರಸ್ತಾವನೆ:

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ಮೈಸೂರು–ನಂಜನಗೂಡು ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ. ಉಲ್ಲೇಖ(2) ರಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು, ಬೆಂಗಳೂರು ರವರು ಮಹಾ ಯೋಜನೆ ಕುರಿತು ಸಾರ್ವಜನಿಕರಿಂದ ಬಂದಂತಹ ಸಲಹೆ/ಸೂಚನೆ, ಪ್ರಾಧಿಕಾರ, ಸ್ಥಳೀಯ ಸಂಸ್ಥೆಗಳಾದ ಪುರಸಭೆ ನಂಜನಗೂಡು ಮತ್ತು ಮೈಸೂರು ಮಹಾನಗರ ಪಾಲಿಕೆ, ಹಾಗೂ ವಿವಿಧ ಇಲಾಖೆಗಳ ಪ್ರಸ್ತಾವನೆಗಳನ್ನು ಗಮನಿಸಿ ನ್ಯೂನ್ಯತೆಗಳನ್ನು ಸರಿಪಡಿಸಿ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಲು ಪ್ರಾಧಿಕಾರಕ್ಕೆ ಸೂಚನೆ ನೀಡಲಾಗಿರುತ್ತದೆ. ಮೇಲೆ ಓದಲಾದ (3)ರಲ್ಲಿ ಮಾನ್ಯ ಉಚ್ಚನ್ಯಾಯಾಲಯವು ನಿಗದಿತ ಅವಧಿಯಲ್ಲಿ ಮಹಾಯೋಜನೆಯನ್ನು ಅಂತಿಮಗೊಳಿಸಲು ಸೂಚನೆ ನೀಡಿ ಪ್ರಕರಣವನ್ನು ಇತ್ಯರ್ಥಗೊಳಿಸಿರುತ್ತದೆ.

ಮಾನ್ಯ ಉಚ್ಚನ್ಯಾಯಾಲಯದ ತೀರ್ಪಿನ ಹಿನ್ನೆಲೆಯಲ್ಲಿ ಪರಿಶೀಲಿಸಿ, ಆಯುಕ್ತರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ರವರು ಮೇಲೆ ಓದಲಾದ (4)ರಲ್ಲಿನ ಪ್ರಸ್ತಾವನೆಗಳಲ್ಲಿ ಮೈಸೂರು–ನಂಜನಗೂಡು ಸ್ಥಳೀಯ ಯೊಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾ ಯೋಜನೆ (ಪರಿಷ್ಕೃತ–2) ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(1) ಹಾಗೂ (2) ರನ್ವಯ ಅಗತ್ಯ ಕ್ರಮ ಜರುಗಿಸಿ ಮಹಾ ಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ರವರಿಗೆ ಸಲ್ಲಿಸಿರುತ್ತಾರೆ.

...2.

ಮೇಲೆ ಓದಲಾದ (5)ರಲ್ಲಿ ನಿರ್ದೇಶಕರು ನಗರ ಮತ್ತು ಗ್ರಾಮಾಂತರ ಯೋಜನೆ ಇಲಾಖೆ ರವರು ಆಯುಕ್ತರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ರವರಿಂದ ಸ್ವೀಕರಿಸಿರುವ ಮೈಸೂರು-ನಂಜನಗೂಡು ಸ್ಥಳೀಯ ಯೊಜನಾ ಪ್ರದೇಶದ (ಪರಿಷ್ಕೃತ-2) ಪ್ರಸ್ತಾವನೆಯನ್ನು ಪರಿಶೀಲಿಸಿ ಅವರ ಅಭಿಪ್ರಾಯದೊಂದಿಗೆ ಅಂತಿಮಗೊಳಿಸುವ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಅದರಂತೆ ಮೈಸೂರು-ನಂಜನಗೂಡು ಸ್ಥಳೀಯ ಯೊಜನಾ ಪ್ರದೇಶದ ಒಟ್ಟು ಜನಸಂಖ್ಯೆಯು 2011ರಲ್ಲಿ 13,25,650 ಇದ್ದು, ಲೆಕ್ಕಾಚಾರದನ್ವಯ 2021ಕ್ಕೆ 19,09,000 ಹಾಗೂ 2031 ಕ್ಕೆ 23,77,000 ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾಯೊಜನೆಯನ್ನು ತಯಾರಿಸಲಾಗಿದೆ.

ಮೈಸೂರು-ನಂಜನಗೂಡು ಸ್ಥಳೀಯ ಯೋಜನಾ ಪ್ರದೇಶದ (ಪರಿಷ್ಕೃತ-2)ರ ಒಟ್ಟು ಪ್ರದೇಶವು 50,708.30 ಹೆಕ್ಟೇರ್ಸ್ ಇದ್ದು, ನಗರದ ಅಭಿವೃದ್ಧಿಗಾಗಿ ನಗರೀಕರಣದ ಎಲ್ಲೆಯಂತೆ 33,095.57 ಹೆಕ್ಟೇರ್ ಪ್ರದೇಶವನ್ನು ಪ್ರಸ್ತಾಪಿಸಿ Convention Center ಗಾಗಿ 211.83 ಹೆಕ್ಟೇರ್, Film City ಗಾಗಿ 256.21 ಹೆಕ್ಟೇರ್, Special Agriculture Zone ಗಾಗಿ 306.28 ಹೆಕ್ಟೇರ್, Agriculture Zone ಗಾಗಿ 16,123.03 ಹೆಕ್ಟೇರ್ ಮತ್ತು Water body ಗಾಗಿ 715.39 ಹೆಕ್ಟೇರ್ ಪ್ರದೇಶದಲ್ಲಿ ಮಹಾಯೋಜನೆಯನ್ನು ರೂಪಿಸಲಾಗಿದೆ.

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ (12)ರಲ್ಲಿ ನಿಗದಿಪಡಿಸಿರುವ ಅಂಶಗಳನ್ನು ಪರಿಗಣಿಸಿ ನಗರದ ಮುಂದಿನ ಯೋಜಿತ ಬೆಳವಣಿಗೆಗೆ ಪ್ರಸ್ತಾಪಿಸಿರುವ 33,095.57 ಹೆಕ್ಟೇರ್ಸ್ ಪ್ರದೇಶದಲ್ಲಿ ವಸತಿಗಾಗಿ, 17,052.17 ಹೆಕ್ಟೇರ್ (ಶೇ.51.52), ವಾಣಿಜ್ಯಕ್ಕಾಗಿ 871.83 ಹೆಕ್ಟೇರ್ (ಶೇ.2.63), ಕೈಗಾರಿಕೆಗಾಗಿ 2,481.29 ಹೆಕ್ಟೇರ್ (ಶೇ.7.50), ಸಾರ್ವಜನಿಕ&ಅರೆ ಸಾರ್ವಜನಿಕ ಉಪಯೋಗಕ್ಕಾಗಿ 2,087.66 ಹೆಕ್ಟೇರ್ (ಶೇ.6.31), ಸಾರ್ವಜನಿಕ ಉಪಯುಕ್ತತೆಗಾಗಿ 421.32 ಹೆಕ್ಟೇರ್ (ಶೇ.1.27), ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 2,435.61 ಹೆಕ್ಟೇರ್ (ಶೇ.7.36), ಸಾರಿಗೆ/ ಸಂಪರ್ಕ ವಲಯಕ್ಕಾಗಿ 5,768.57 ಹೆಕ್ಟೇರ್ (ಶೇಕಡ 17.43), ವ್ಯವಸಾಯ ವಲಯಕ್ಕಾಗಿ 780.91 ಹೆಕ್ಟೇರ್ (ಶೇ.2.36) ಜಲಾವೃತ್ತ ಪ್ರದೇಶಕ್ಕಾಗಿ 432.65 ಹೆಕ್ಟೇರ್ (ಶೇ.1.31) ಮತ್ತು ಅರಣ್ಯ ಪ್ರದೇಶಕ್ಕಾಗಿ 763.55 ಹೆಕ್ಟೇರ್ (ಶೇ. 2.31) ಪ್ರದೇಶವನ್ನು ನಿಗಧಿಪಡಿಸಲಾಗಿದೆ.

ಮಹಾ ಯೋಜನೆಯನ್ನು (ಪರಿಷ್ಕೃತ-2) ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನೆ ರವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಮಾನ್ಯ ಉಚ್ಚನ್ಯಾಯಾಲಯದ ಅರ್ಜಿಗಳಲ್ಲಿ ನೀಡಿರುವ ನಿರ್ದೇಶನದ ಹಿನ್ನೆಲೆಯಲ್ಲಿ ಸರ್ಕಾರವು ಕೂಲಂಕುಷವಾಗಿ ಪರಿಶೀಲಿಸಿದ್ದು, ಸದರಿ ಆದೇಶವು ಈ ಕೆಳಕಂಡಂತಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 597 ಮೈಅಪ್ರಾ 2011 (ಭಾ-2), ದಿನಾಂಕ: 12.01.2016**

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮೈಸೂರು-ನಂಜನಗೂಡು ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪರಿಷ್ಕೃತ-2)ನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3)ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಲಾಗಿದೆ. ಮಹಾ ಯೋಜನೆಗೆ (ಪ-2) ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

**ಷರತ್ತುಗಳು:**

ಕುರುಬಾರಹಳ್ಳಿ ಗ್ರಾಮದ ಸ.ನಂ:4ರ ಜಮೀನಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ಪ್ರಕರಣ ದಾಖಲಾಗಿದ್ದು, ಈ ಸರ್ವೆ ನಂಬರುಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯದ ಅಂತಿಮ ತೀರ್ಪಿಗೆ ಒಳಪಟ್ಟಿರತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

12/1/16
(ವಿ. ರಾಜೇಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿಗಳು,
ನಗರಾಭಿವೃದ್ಧಿ ಇಲಾಖೆ.

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಸದರಿ ಅಧಿಸೂಚನೆಯನ್ನು ರಾಜ್ಯ ಪತ್ರದಲ್ಲಿ ಪ್ರಕಟಿಸಿ ಅದರ ಪ್ರಕಟಿತ ಅಧಿಸೂಚನೆಯ 150 ಪ್ರತಿಗಳನ್ನು ಸರ್ಕಾರಕ್ಕೆ ಕಳುಹಿಸುವಂತೆ ಕೋರಲಾಗಿದೆ.

**ಪ್ರತಿಯನ್ನು:**

1. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು
2. ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ,
3. ಆಯುಕ್ತರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು
4. ...